ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ ರಾಣೇಬೆನ್ನೂರು.

ಸಿ.ಸಿ.ಸಂಖ್ಯೆ 300/2026

ಪಿ ಡಬ್ಲ್ಯೂ:1

ಸಿ ಡಬ್ಲ್ಯೂ: 1

| | | |
|---|---|---|
| ಸಾಕ್ಷಿಯ ಹೆಸರು | : | ಈರಣ್ಣ |
| ತಂದೆಯ ಹೆಸರು | : | ಈಶಪ್ಪ |
| ವಯಸ್ಸು | : | 29 |
| ಉದ್ಯೋಗ | : | ಖಾಸಗಿ ಕೆಲಸ |
| ವಾಸಸ್ಥಳ | : | ರಾಣೆಬೆನ್ನೂರು |

ದಿನಾಂಕಃ 20.07.2026 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋದಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ**

ದಿನಾಂಕ 15.01.2026 ರಂದು ಸಂಜೆ 6.15 ಕ್ಕೆ ಎರೆಕುಪ್ಪಿ ರಸ್ತೆಯ ಬಾಗಡೆ ಮನೆ ಎದುರುಗಡೆ ಅಪಘಾತವಾಗಿರುತ್ತದೆ. ಆ ಕುರಿತು ನನಗೆ ಚಾಸ 5 ರವರು ತಿಳಿಸಿರುತ್ತಾರೆ. ಸದರಿ ಅಪಘಾತವು ಯಾವ ವಾಹನದಿಂದ ಹಾಗೂ ಯಾರ ತಪ್ಪಿನಿಂದ ಆಗಿರುತ್ತದೆ ಎಂದು ನನಗೆ ಗೊತ್ತಿಲ್ಲ. ನಾನು ಪೋಲಿಸರ ಮುಂದೆ ಪಿರ್ಯಾದಿಯನ್ನು ನೀಡಿರುತ್ತೇನೆ. ಸಾಕ್ಷಿಯು ಸದರಿ ಪಿರ್ಯಾದಿ ಮತ್ತು ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಪಿರ್ಯಾದಿಯನ್ನು ನಿಪಿ 1 ಮತ್ತು ಸಾಕ್ಷಿಯ ಸಹಿಯನ್ನು ನಿಪಿ 1 ಎ ಎಂದು ಗುರುತಿಸಲಾಯಿತು. ಗುನ್ನಾ ಜಾಗದ ಕುರಿತು ನಾನು ಪೋಲಿಸರ ಮುಂದೇ ಯಾವುದೇ ಮರು ಹೇಳಿಕೆ ನೀಡಿರುವುದಿಲ್ಲ.

**ಮಾನ್ಯ ಸಸಅ ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು**

**ಪಾಟೀ ಸವಾಲುಃ ಮಾನ್ಯ ಸ.ಸ.ಅ. ರವರಿಂದಃ**

ದಿನಾಂಕಃ15.01.2026 ರಂದು ಸಂಜೆ 6.15 ರ ಸುಮಾರಿಗೆ ಆರೋಪಿಯು ತನ್ನ ಮೋಟರ್ ಸೈಕಲ್ ನಂ ಕೆ ಎ 27/ವೈ 5760 ರನ್ನು ಅತೀವೇಗವಾಗಿ ಮತ್ತು ಅಜಾಗರುಕತೆಯಿಂದ ಚಾಲನೆ ಮಾಡಿಕೊಂಡು ಬಂದು ನನ್ನ ತಂದೆಗೆ ಅಪಘಾತ ಪಡಿಸಿ ತೀವ್ರ

ಸ್ವರೂಪದ ಗಾಯಗಳಾಗಿದ್ದು ನಂತರ ಆಸ್ಪತ್ರೆಗೆ ಕೆರೆದುಕೊಂಡು ಹೋಗುವಾಗ ಮೃತ ಹೊಂದಿರುತ್ತಾರೆ ಎಂದರೆ ಸಾಕ್ಷಿಯು ನನಗೆ ಅಪಘಾತದ ಕುರಿತು ಮಾಹಿತಿ ಇರುವುದಿಲ್ಲ ಎಂದು ನುಡಿಯುತ್ತಾರೆ. ಅಪಘಾತವು ಆರೋಪಿಯ ತಪ್ಪಿನಿಂದ ಆಗಿರುತತದೆ ಎಂದರೆ ಸಾಕ್ಷಿಯು ನನಗೆ ಅಪಘಾತದ ಕುರಿತು ಮಾಹಿತಿ ಇರುವುದಿಲ್ಲ ಎಂದು ನುಡಿಯುತ್ತಾರೆ. ಗುನ್ನಾ ಜಾಗವು ಎರೆಕುಪ್ಪಿ ರಸ್ತೆಯ ಸಿದ್ದಯ್ಯ ಪಾಟೀಲ ಮನೆಯ ಬಳಿ ಆಗಿರುವ ಕುರಿತು ದಿನಾಂಕ 16.01.2026 ರಂದು ಪುರವಣಿ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿ. ನಾನು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ಪಾಟೀ ಸವಾಲು ಇಲ್ಲ.**

ಮರು ವಿಚಾರಣೆ ಇಲ್ಲ.

ತೆ.ನ್ಯಾದಲ್ಲಿ ಬೆ.ಮಾಡಲಾಯಿತು.

ನನ್ನ ಸಮಕ್ಷಮ

Sd/-

ಓ ಹೇ ಕೆ ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.